ಶರನು ಶರನಯ್ಯ ಶರನು ಬೆನಕ
ನೀಡಯ್ಯ ಬಾಳೆಲ್ಲ ಬೆಳಗುವ ಬೆಳಕ
ನಿನ್ನ ನಂಬಿದ ಜನಕೆ ಇಹುದಯ್ಯ ಎಲ್ಲ ಸುಖ
ತಂದೆ ಕಾಯೋ ನಮ್ಮ ಕರಿಮುಖ ॥ ಪ ॥

ಎಲ್ಲಾರು ಒಂದಾಗಿ ನಿನ್ನ
ನಮಿಸಿ ನಲಿಯೋದು ನೋಡೋಕೆ ಚೆನ್ನ
ಗರಿಕೆ ತಂದರೆ ನೀನು
ಕೊಡುವೆ ವರವನ್ನ
ಗತಿ ನೀನೆ ಗಣಪನೆ ಕೈ ಹಿಡಿಯೋ ಮುನ್ನ ॥೧॥

ಸೂರ್ಯನೆದುರಲಿ ಮಂಜು ಕರಗುವ ರೀತಿ
ನಿನ್ನ ನೆನೆಯಲು ಒಡನೆ ಓಡುವುದು ಭೀತಿ
ನೀಡಯ್ಯ ಬಾಳೆಲ್ಲ ಬೆಳಗುವ ಶಕುತಿ
ತೋರಯ್ಯ ನಮ್ಮಲ್ಲಿ ನಿನ್ನಯ ಪ್ರೀತಿ ॥೨॥

ಬೆನಕ ಬೆನಕ ಎಕದಂತ
ಪಚ್ಚೆಗಲ್ಲು ಪಾಣಿಮೆಟ್ಟು ಒಪ್ಪುವ ವಿಘ್ನೇಶ್ವರ
ನಿನಗೆ ಇಪ್ಪತೊಂದು ನಮಸ್ಕಾರಗಳು ॥೩॥